ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: Other State Matter

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ    ದಿನಾಂಕ : DATE : 21/10/2019

# ಮಹಾರಾಷ್ಟ್ರ, ಹರಿಯಾಣ ಮತಕದನ ಇಂದು

## ಕಾಂಗ್ರೆಸ್‌ಗೆ ಪುನಶ್ಚೇತನದ ಕನಸು । ಬಿಜೆಪಿಗೆ ಅಧಿಕಾರ ಉಳಿಸಿಕೊಳ್ಳುವ ತವಕ

**ಮುಂಬಯಿ/ಚಂಡೀಗಢ:** ಲೋಕಸಭೆ ಚುನಾವಣೆ ಬಳಿಕ ಮತ್ತೊಂದು ಮತ ಸಮರಕ್ಕೆ ಮಹಾರಾಷ್ಟ್ರ ಮತ್ತು ಹರಿಯಾಣ ಸೋಮವಾರ ಸಾಕ್ಷಿಯಾಗಲಿವೆ.

ಉಭಯ ರಾಜ್ಯಗಳ ವಿಧಾನಸಭೆಗೆ ಅ.21ರಂದು ಮತದಾನ ನಡೆಯಲಿದ್ದು, ಎರಡೂ ಕಡೆ ಆಡಳಿತಾರೂಢ ಬಿಜೆಪಿ ಅಧಿಕಾರ ಉಳಿಸಿಕೊಳ್ಳುವ ತವಕದಲ್ಲಿದೆ. ಇದೇ ವೇಳೆ, ಆಡಳಿತ ವಿರೋಧಿ ಅಲೆಯ ಲಾಭ ಪಡೆದು ಗೆಲುವಿನ ಕದ ತಟ್ಟುವ ಪ್ರಯತ್ನದಲ್ಲಿ ಪ್ರತಿಪಕ್ಷಗಳು ನಿರತವಾಗಿದೆ. ಬಹುತೇಕ ಚುನಾವಣಾಪೂರ್ವ ಸಮೀಕ್ಷೆಗಳು ಎರಡೂ ರಾಜ್ಯಗಳಲ್ಲಿ ಬಿಜೆಪಿಯೇ ಮತ್ತೊಂದು ಅವಧಿಗೆ ಅಧಿಕಾರದ ಚುಕ್ಕಾಣಿ ಹಿಡಿಯಲಿದೆ ಎಂದು ಭವಿಷ್ಯ ನುಡಿದಿವೆ.

**ಎನ್‌ಡಿಎ-ಯುಪಿಎ ಜಿದ್ದಾಜಿದ್ದಿ:** 288 ಕ್ಷೇತ್ರಗಳ ವಿಧಾನಸಭೆ ಸ್ಥಾನಗಳನ್ನು ಹೊಂದಿರುವ ಮಹಾರಾಷ್ಟ್ರದಲ್ಲಿ ಬಿಜೆಪಿ-ಶಿವಸೇನೆ ನೇತೃತ್ವದ ಎನ್‌ಡಿಎ ಮೈತ್ರಿಕೂಟ ಹಾಗೂ ಕಾಂಗ್ರೆಸ್-ಎನ್‌ಸಿಪಿ ನೇತೃತ್ವದ ಯುಪಿಎ ಮೈತ್ರಿಕೂಟದ ವಿರುದ್ಧ ಜಿದ್ದಾಜಿದ್ದಿ ಸಮರ ನಡೆಯಲಿದೆ. ಎನ್‌ಡಿಎ ಮೈತ್ರಿಕೂಟದ ಸಣ್ಣ ಪಕ್ಷಗಳೂ ಸೇರಿದಂತೆ 164 ಸ್ಥಾನಗಳಲ್ಲಿ ಬಿಜೆಪಿ ಕಣಕ್ಕಿಳಿಯಲಿದೆ. ಬಿಜೆಪಿಯ ಪ್ರಮುಖ ಮಿತ್ರಪಕ್ಷ ಶಿವಸೇನೆ 126 ಕ್ಷೇತ್ರಗಳಲ್ಲಿ ಅಭ್ಯರ್ಥಿಗಳನ್ನು ಕಣಕ್ಕಿಳಿಸಿದೆ. ಕಾಂಗ್ರೆಸ್ 147, ಎನ್‌ಸಿಪಿ 121 ಸ್ಥಾನಗಳಲ್ಲಿ ಸ್ಪರ್ಧಿಸಿವೆ. ರಾಜ್ ಠಾಕ್ರೆ ನೇತೃತ್ವದ ನವ ನಿರ್ಮಾಣ ಸೇನೆ ಸ್ವತಂತ್ರವಾಗಿ 101 ಕ್ಷೇತ್ರಗಳಲ್ಲಿ ಉಮೇದುವಾರರನ್ನು ಕಣಕ್ಕಿಳಿಸಿದೆ. ಸಿಪಿಐನ 16, ಸಿಪಿಎಂನ 16 ಅಭ್ಯರ್ಥಿಗಳು ಸ್ಪರ್ಧೆಯಲ್ಲಿದ್ದಾರೆ. ಮಾಯಾವತಿ ನೇತೃತ್ವದ ಬಿಎಸ್ಪಿ 262 ಕ್ಷೇತ್ರಗಳಲ್ಲಿ ಉಮೇದುವಾರರನ್ನು ಹಾಕಿದೆ. ಬರೋಬ್ಬರಿ 1,400 ಪಕ್ಷೇತರ ಅಭ್ಯರ್ಥಿಗಳು ಅದೃಷ್ಟ ಪರೀಕ್ಷೆಗಿಳಿದಿದ್ದಾರೆ. ಶಿವಸೇನೆ ವರಿಷ್ಠ ಉದ್ಧವ್ ಠಾಕ್ರೆ ಪುತ್ರ ಆದಿತ್ಯ ಠಾಕ್ರೆ ಮುಂಬಯಿಯ ವರ್ಲಿಯಿಂದ ಕಣಕ್ಕೆ ಇಳಿದಿದ್ದಾರೆ. ಠಾಕ್ರೆ ಕುಟುಂಬನೇರ ಚುನಾವಣಾ ಅಖಾಡಕ್ಕೆ ಇಳಿದಿದ್ದು ಇದೇ ಮೊದಲು.

ಪ್ರಕಾಶ್ ಅಂಬೇಡ್ಕರ್ ನೇತೃತ್ವದ ವಂಚಿತ್ ಬಹುಜನ್ ಅಘಾಡಿ 288 ಕ್ಷೇತ್ರಗಳಲ್ಲೂ ಅಭ್ಯರ್ಥಿಗಳನ್ನು ಕಣಕ್ಕಿಳಿಸಿದೆ. ಕಳೆದ ಲೋಕಸಭಾ ಚುನಾವಣೆಯಲ್ಲಿ ಮೊದಲ ಸಲ ಸ್ಪರ್ಧಿಸಿದರೂ ಉತ್ತಮ ಪ್ರದರ್ಶನ ನೀಡಿದ್ದ 'ವಿಬಿಎ' ಈ ಬಾರಿ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್‌ನ ಮತಗಳನ್ನು ಸೆಳೆದುಕೊಳ್ಳುವ ಸಾಧ್ಯತೆಯಿವೆ. ಮಹಾರಾಷ್ಟ್ರದಲ್ಲಿ ಪ್ರಧಾನಿ ಮೋದಿ, ಬಿಜೆಪಿ ಅಧ್ಯಕ್ಷ ಅಮಿತ್ ಶಾ, ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಎನ್‌ಸಿಪಿ ವರಿಷ್ಠ ಶರದ್ ಪವಾರ್, ಶಿವಸೇನೆ ವರಿಷ್ಠ ಉದ್ಧವ್ ಠಾಕ್ರೆ ಸೇರಿದಂತೆ ಘಟಾನುಘಟಿ ನಾಯಕರು ಸರಣಿ ಪ್ರಚಾರ ಸಭೆಗಳನ್ನು ನಡೆಸಿದ್ದಾರೆ.

**ಬಿಜೆಪಿಗೆ ಜೆಜೆಪಿ ಪೈಪೋಟಿ:** ಹರಿಯಾಣದಲ್ಲಿ ಮುಖ್ಯಮಂತ್ರಿ ಮನೋಹರ್ ಲಾಲ್ ಖಟ್ಟರ್ ನೇತೃತ್ವದ ಬಿಜೆಪಿ ಸರಕಾರವನ್ನು ಮಣಿಸಿ ಮತ್ತೆ ಅಧಿಕಾರ ಹಿಡಿಯಲು ಕಾಂಗ್ರೆಸ್ ಸರ್ವ ಪ್ರಯತ್ನ ನಡೆಸುತ್ತಿದೆ. ಹೀಗಾಗಿಯೇ ಇತ್ತೀಚೆಗೆ ಕಾಂಗ್ರೆಸ್ ರಾಜ್ಯದಲ್ಲಿ ಪಕ್ಷಕ್ಕೆ ಹೊಸ ಸಾರಥಿಯನ್ನೂ ನೇಮಿಸಿದೆ. 90 ಸ್ಥಾನಗಳಿಗಾಗಿ ನಡೆಯುವ ಚುನಾವಣೆಯಲ್ಲಿ ಬಿಜೆಪಿ, ಕಾಂಗ್ರೆಸ್, 'ಐಎನ್‌ಎಲ್‌ಡಿ'ಯಿಂದ ಬೇರ್ಪಟ್ಟು ಹೊಸದಾಗಿ ರಚನೆಗೊಂಡ ದುಷ್ಯಂತ್ ಚೌತಾಲಾ ನೇತೃತ್ವದ ಜನನಾಯಕ ಜನತಾ ಪಕ್ಷ (ಜೆಜೆಪಿ) ನಡುವೆ ಜಿದ್ದಾಜಿದ್ದಿ ನಡೆಯಲಿದೆ. ಹರಿಯಾಣದಲ್ಲಿ ಮೋದಿ 7 ಹಾಗೂ ರಾಹುಲ್ ಗಾಂಧಿ 2 ಪ್ರಚಾರ ರ‍್ಯಾಲಿಗಳನ್ನು ನಡೆಸಿದ್ದಾರೆ.



ಹರಿಯಾಣದ ಸೋನಿಪತ್‌ನಲ್ಲಿ ಚುನಾವಣಾ ಸಿಬ್ಬಂದಿ ಭಾನುವಾರ ಮತಯಂತ್ರಗಳೊಂದಿಗೆ ಮತಗಟ್ಟೆಗಳಿಗೆ ತೆರಳಿದರು.

### 17 ರಾಜ್ಯಗಳಲ್ಲಿ ಉಪ ಚುನಾವಣೆ

ಮಹಾರಾಷ್ಟ್ರದ ಸತಾರಾ ಮತ್ತು ಬಿಹಾರದ ಸಮಷ್ಟಿಪುರ ಲೋಕಸಭಾ ಕ್ಷೇತ್ರಗಳಿಗೂ ಸೋಮವಾರ ಉಪ ಚುನಾವಣೆ ನಡೆಯಲಿದೆ. ಉತ್ತರ ಪ್ರದೇಶದ 11, ಕೇರಳ ಮತ್ತು ಬಿಹಾರಗಳ ತಲಾ ಐದು ವಿಧಾನಸಭಾ ಕ್ಷೇತ್ರಗಳೂ ಸೇರಿದಂತೆ 17 ರಾಜ್ಯಗಳ 51 ವಿಧಾನಸಭಾ ಕ್ಷೇತ್ರಗಳಿಗೂ ಚುನಾವಣೆ ನಡೆಯಲಿದೆ. ಬೆಳಗ್ಗೆ 7ರಿಂದ ಸಂಜೆ 6 ಗಂಟೆವರೆಗೂ ಮತದಾನ ನಡೆಯಲಿದೆ. ಮಹಾರಾಷ್ಟ್ರದಲ್ಲಿ 3 ಲಕ್ಷಕ್ಕೂ ಅಧಿಕ ರಾಜ್ಯ ಮತ್ತು ಕೇಂದ್ರೀಯ ಪೊಲೀಸ್ ಸಿಬ್ಬಂದಿಯನ್ನು ಭದ್ರತೆಗಾಗಿ ನಿಯೋಜಿಸಲಾಗಿದೆ. ಹರಿಯಾಣದಲ್ಲಿ 75,000 ಭದ್ರತಾ ಸಿಬ್ಬಂದಿಯನ್ನು ಚುನಾವಣಾ ಭದ್ರತೆಗೆ ನಿಯೋಜಿಸಲಾಗಿದೆ.

| ರಾಜ್ಯ | ಒಟ್ಟು ಕ್ಷೇತ್ರಗಳು | ಕಣದಲ್ಲಿರುವ ಅಭ್ಯರ್ಥಿಗಳು | ಮತದಾರರು |
|---|---|---|---|
| ಮಹಾರಾಷ್ಟ್ರ | 288 | 3,237 | 8.9 ಕೋಟಿ |
| ಹರಿಯಾಣ | 90 | 1,168 | 1.83 ಕೋಟಿ |

[illegible]

**ಮಹಾರಾಷ್ಟ್ರ:** ಸಿಎಂ ದೇವೇಂದ್ರ ಫಡ್ನವೀಸ್, ಅಶೋಕ್ ಚೌಹಾಣ್, ಪೃಥ್ವಿರಾಜ್ ಚೌಹಾಣ್, ಅಜಿತ್ ಪವಾರ್, ಆದಿತ್ಯ ಠಾಕ್ರೆ

**ಹರಿಯಾಣ:** ಸಿಎಂ ಮನೋಹರ್ ಲಾಲ್ ಖಟ್ಟರ್, ಭೂಪಿಂದರ್ ಸಿಂಗ್ ಹೂಡಾ, ರಣದೀಪ್ ಸಿಂಗ್ ಸುರ್ಜೇವಾಲ, ದುಷ್ಯಂತ್ ಚೌತಾಲಾ, ಬಬಿತಾ ಪೋಗಟ್